ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/37/ಸ್ಥಳಾವಕಾಶ/2012-13

ದಿನಾಂಕ: 28.02.2017.

## ಸುತ್ತೋಲೆ

ವಿಷಯ: 2017ರ ದ್ವಿತೀಯ ಪಿಯುಸಿ ಪರೀಕ್ಷೆಗಳನ್ನು ಸುವ್ಯವಸ್ಥಿತವಾಗಿ ನಡೆಸುವ ಸಂಬಂಧ ಇಲಾಖಾ ವ್ಯಾಪ್ತಿಯ ಕಾಲೇಜುಗಳ ಕಟ್ಟಡಗಳನ್ನು ಒದಗಿಸುವ ಬಗ್ಗೆ.

ಉಲ್ಲೇಖ: ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಪಪೂಶಿ/ಪರೀಕ್ಷೆ/ದ್ವಿಪಿಪ/2016-17 ದಿ:27.02.2017.

* * * * * *

ಪದವಿ ಪೂರ್ವ ಶಿಕ್ಷಣ ಇಲಾಖೆಯ 2017ರ ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆಗಳನ್ನು ದಿನಾಂಕ:09.03.2017 ರಿಂದ 27.03.2017 ರವರೆಗೆ ನಡೆಸಲು ತೀರ್ಮಾನಿಸಿದ್ದು, ಪದವಿ ತರಗತಿಗಳನ್ನು ಬೋಧಿಸುತ್ತಿರುವ ಕಾಲೇಜುಗಳನ್ನು ದ್ವಿತೀಯ ಪಿ.ಯು.ಸಿ ಪರೀಕ್ಷೆಗಳಿಗೆ ಪರೀಕ್ಷಾ ಕೇಂದ್ರಗಳನ್ನಾಗಿ ಬಳಸಿಕೊಳ್ಳಲು ಅನುಮತಿ ನೀಡುವಂತೆ ಉಲ್ಲೇಖಿತ ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕರು ಪತ್ರದಲ್ಲಿ ಕೋರಿರುತ್ತಾರೆ.

ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕರ ಕೋರಿಕೆ ಮೇರೆಗೆ 2017ರ ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆಗಳನ್ನು ನಡೆಸಲು ಅನುಕೂಲವಾಗುವಂತೆ ಅಗತ್ಯವಿರುವ ಕಟ್ಟಡ/ಕೊಠಡಿಗಳನ್ನು, ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಸಹಕರಿಸುವಂತೆ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

28/2/17

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ – ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ) – ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿಯನ್ನು:**

1. ನಿರ್ದೇಶಕರ ಆಪ್ತ ಶಾಖೆಗೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಭವನ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.
2. ಕಛೇರಿ ಪ್ರತಿ.